ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
Website : https://kptcl.karnataka.gov.in

ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560 009

ಕವಿಪ್ರನಿನಿ/ಬಿ64/23585/2021-22 ದಿನಾಂಕ : 26 MAY 2022

## ಸುತ್ತೋಲೆ

ವಿಷಯ: ಅಧಿಕಾರಿಗಳು/ನೌಕರರು ರವರಿಗೆ ಮುಂದಿನ ಉನ್ನತ ಹುದ್ದಯ ವೇತ ಶ್ರೇಣಿ ಹಾಗೂ ಕೆರಿಯರ್ ಅಡ್ವಾನ್ಸ್‌ಮೆಂಟ್ ಸೌಲಭ್ಯವನ್ನು ಮಂಜೂರು ಮಾಡುವ ಪ್ರಸ್ತಾವನೆಗಳು ವಿಳಂಬವಾಗಿ ಸಲ್ಲಿಸುತ್ತಿರುವ ಬಗ್ಗೆ.

ಉಲ್ಲೇಖ: 1. ನಿಗಮದ ಆದೇಶ ಸಂಖ್ಯೆ:ಕವಿಪ್ರನಿನಿ/ಬಿ16/5816/1982-83, ದಿನಾಂಕ:07.09.1982
2. ನಿಗಮದ ಆದೇಶ ಸಂಖ್ಯೆ:ಕವಿಪ್ರನಿನಿ/ಬಿ16/5816/1982-83, ದಿನಾಂಕ:02.11.2007

******

ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಆದೇಶಗಳನ್ವಯ ನಿಗಮದಲ್ಲಿ ಕಾರ್ಯನಿರತ ಅಧಿಕಾರಿಗಳು/ನೌಕರರುಗಳು ಮುಂದಿನ ಉನ್ನತ ಹುದ್ದೆಯ ವೇತನ ಶ್ರೇಣಿ ಮತ್ತು ಕೆರಿಯರ್ ಅಡ್ವಾನ್ಸ್‌ಮೆಂಟ್ ಸೌಲಭ್ಯವನ್ನು ಪಡೆಯಲು ಅರ್ಹರಿರುವ ಅಧಿಕಾರಿಗಳು/ನೌಕರರ ಪ್ರಸ್ತಾವನೆಗಳನ್ನು ಸಂಬಂಧಪಟ್ಟ ವಿಭಾಗೀಯ/ ವೃತ್ತ/ ವಲಯ/ನಿಗಮ ಕಾರ್ಯಾಲಯಗಳಿಂದ ಸಲ್ಲಿಸಬೇಕಾಗಿರುತ್ತದೆ. ಆದರೆ ಈ ಸಂಬಂಧ ಹಲವಾರು ಪ್ರಸ್ತಾವನೆಗಳು ಅರ್ಹರಾದ ಮಾಹೆಯಲ್ಲಿಯೇ ಸಲ್ಲಿಸುವ ಬದಲಾಗಿ ಹಲವಾರು ವರ್ಷಗಳ ನಂತರ ತಡವಾಗಿ ಸಲ್ಲಿಸುತ್ತಿರುವುದು ನಿಗಮದ ಗಮನಕ್ಕೆ ಬಂದಿರುತ್ತದೆ ಹಾಗೂ ಈ ರೀತ್ಯ ಅತ್ಯಂತ ವಿಳಂಭವಾಗಿ ಪ್ರಸ್ತಾವನೆಯನ್ನು ಸಲ್ಲಿಸುವುದರಿಂದ ನಿವೃತ್ತಿ ಹೊಂದುವ/ಹೊಂದಿದ ಅಧಿಕಾರಿಗಳ/ ನೌಕರರ ಸೇವಾ ಸೌಲಭ್ಯವನ್ನು ನೀಡುವಲ್ಲಿಯೂ ಸಹಾ ವಿಳಂಬವಾಗುತ್ತಿರುವುದು ಕಂಡುಬಂದಿರುತ್ತದೆ. ಇದು ಅತ್ಯಂತ ಶೋಚನೀಯ ಸಂಗತಿಯಾಗಿದ್ದು, ಈ ಹಿನ್ನಲೆಯಲ್ಲಿ ಉಲ್ಲೇಖಿತ ಆದೇಶಗಳನ್ವಯ ಮುಂದಿನ ಉನ್ನತ ಹುದ್ದೆಯ ವೇತನ ಶ್ರೇಣಿ ಮತ್ತು ಕೆರಿಯರ್ ಅಡ್ವಾನ್ಸ್‌ಮೆಂಟ್ ಸೌಲಭ್ಯವನ್ನು ಪಡೆಯಲು ಅರ್ಹರಿರುವ ಅಧಿಕಾರಿಗಳು/ನೌಕರರುಗಳ ಪ್ರಸ್ತಾವನೆಗಳನ್ನು ಅತ್ಯಂತ ಜರೂರಾಗಿ ಸಂಬಂಧಪಟ್ಟ ವಿಭಾಗ/ವೃತ್ತ/ವಲಯ/ನಿಗಮ ಕಛೇರಿಗಳಿಂದ ಕವಿಪ್ರನಿನಿಗೆ ಸಲ್ಲಿಸಲು ಸೂಚಿಸಿದೆ. ತಪ್ಪಿದ್ದಲ್ಲಿ, ಈ ವಿಷಯವನ್ನು ನಿಗಮವು ಅತ್ಯಂತ ಗಂಭೀರವಾಗಿ ಪರಿಗಣಿಸಿ, ಶಿಫಾರಸ್ಸು ಮಾಡುವ ಅಧಿಕಾರಿಯನ್ನು ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಈ ಮೂಲಕ ತಿಳಿಸಲಾಗಿದೆ.

ನಿರ್ದೇಶಕರು(ಆಡಳಿತ ಮತ್ತು ಮಾ.ಸಂ)
ಕವಿಪ್ರನಿನಿ.

ಪ್ರತಿಗಳು:

1. ಎಲ್ಲಾ ವ್ಯವಸ್ಥಾಪಕ ನಿರ್ದೇಶಕರು, ವಿದ್ಯುತ್ ಸರಬರಾಜು ಕಂಪನಿಗಳು/ಪಿಸಿಕೆಎಲ್.
2. ಎಲ್ಲಾ ಮುಖ್ಯ ಇಂಜಿನಿಯರ್(ವಿದ್ಯುತ್), ಕವಿಪ್ರನಿನಿ/ವಿದ್ಯುತ್ ಸರಬರಾಜು ಕಂಪನಿಗಳು.
3. ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿದ್ಯುತ್), ಕವಿಪ್ರನಿನಿ/ವಿದ್ಯುತ್ ಸರಬರಾಜು ಕಂಪನಿಗಳು.
4. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿದ್ಯುತ್), ಕವಿಪ್ರನಿನಿ/ವಿದ್ಯುತ್ ಸರಬರಾಜು ಕಂಪನಿಗಳು.
5. ಪ್ರತಿ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ kptcl.karnataka.govt.in-->eprasarana ವೆಬ್ ಸ್ಶೆಟ್‌ನಲ್ಲಿ ಪ್ರಕಟಿಸಲಾಗಿದೆ.